# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 484(515) |
| ಮಾನ್ಯ ಸದಸ್ಯರ ಹೆಸರು | : | ಡಾ. ತಳವಾರ್ ಸಾಬಣ್ಣ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 20.02.2023 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿಗಳು ಎಷ್ಟು; (ವಿವರ ನೀಡುವುದು) | ಕರ್ನಾಟಕ ವಿಶ್ವವಿದ್ಯಾಲಯದಲ್ಲಿ 93 ಸ್ವಚ್ಛತಾ ಕಾರ್ಮಿಕರು ಗುತ್ತಿಗೆದಾರರ ಮೂಲಕ ಕಾರ್ಯನಿರ್ವಹಿಸುತ್ತಿದ್ದಾರೆ. |
| (ಆ) | ಸರ್ಕಾರದ ನಿಯಮಾನುಸಾರ ವಿಶ್ವವಿದ್ಯಾಲಯ ಸಫಾಯಿ ಕರ್ಮಚಾರಿಗಳಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ; | ಕರ್ನಾಟಕ ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಕರ್ನಾಟಕ ಕಾಲೇಜು, ಮಾಧ್ಯಮಿಕ ಶಾಲೆ, ಬಿ.ಎಡ್ ಕಾಲೇಜು, ಸರ್ ಸಿದ್ದಪ್ಪ ಕಾನೂನು ಮಹಾವಿದ್ಯಾಲಯ, ಧಾರವಾಡ ಹಾಗೂ ಸ್ನಾತಕೋತ್ತರ ಕೇಂದ್ರಗಳಾದ ಕಾರವಾರ, ಹಾವೇರಿ, ಮತ್ತು ಗದಗ ಆವರಣಗಳಲ್ಲಿರುವ ಕಟ್ಟಡಗಳ ನೈರ್ಮಲೀಕರಣ ಸ್ವಚ್ಛತೆಯ ಕಾಮಗಾರಿ ಇತ್ಯಾದಿಗಳನ್ನು ನಿರ್ವಹಿಸಲು ಕಾಮಗಾರಿ ಟೆಂಡರ್ ಆಹ್ವಾನಿಸಿ ಗುತ್ತಿಗೆದಾರರ ಮೂಲಕ ಕೆಲಸ ಕೈಗೊಳ್ಳಲಾಗುತ್ತದೆ. ಗುತ್ತಿಗೆದಾರರ ಮೂಲಕ ಕೆಲಸ ನಿರ್ವಹಿಸುವ 93 ಸ್ವಚ್ಛತಾ ಕಾರ್ಮಿಕರಿಗೆ ಅನ್ವಯಿಸುವ ಕನಿಷ್ಠವೇತನ ಕಾಯ್ದೆಯನುಸಾರ ವೇತನವನ್ನು E.S.I ಮತ್ತು E.P.F ಸೇರಿಸಿ ಗುತ್ತಿಗೆದಾರರ ಮೂಲಕ ಪಾವತಿಸಲಾಗುತ್ತಿದೆ.<br>ಅಲ್ಲದೆ ಸ್ವಚ್ಛತಾ ಕಾರ್ಮಿಕರಿಗೆ ಗುತ್ತಿಗೆದಾರರು ಒದಗಿಸಬೇಕಾದ ಸೌಲಭ್ಯಗಳನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ. |

| | | |
|---|---|---|
| (ಇ) | ಸಫಾಯಿ ಕರ್ಮಚಾರಿಗಳ ಸೇವಾ ಭದ್ರತೆ ಕುರಿತು ವಿಶ್ವವಿದ್ಯಾಲಯ ಯಾವ ಕ್ರಮಗಳನ್ನು ಕೈಗೊಂಡಿದೆ; | ಸದರಿ ಸ್ವಚ್ಛತಾ ಕಾರ್ಮಿಕರು ಗುತ್ತಿಗೆದಾರರಿಂದ ನಿಯೋಜನಗೊಂಡ ಪ್ರಯುಕ್ತ ಸೇವಾಭದ್ರತೆಯ ಕುರಿತಾದ ಅಂಶ ಉದ್ಭವಿಸುವುದಿಲ್ಲ. |
| (ಈ) | ಸಫಾಯಿ ಕರ್ಮಚಾರಿಗಳ ಆರೋಗ್ಯ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು) | ಸ್ವಚ್ಛತಾ ಕಾರ್ಮಿಕರ ಆರೋಗ್ಯ ರಕ್ಷಣೆಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ. |

**ಸಂಖ್ಯೆ: ಇಡಿ/ 9 /ಯುಕೆವಿ /2023**

**ಡಾ. ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ಐಟಿ – ಬಿಟಿ ಮತ್ತು ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ
ಉದ್ಯಮಶೀಲತೆ ಸಚಿವರು

C

**ಅನುಬಂಧ-1**

| | |
|---|---|
| (i) | ಗುತ್ತಿಗೆದಾರರು ನಿಯಮಾನುಸಾರ ಕಾರ್ಮಿಕರಿಗೆ ಪ್ರತಿ ತಿಂಗಳು 7ನೇ ದಿನಾಂಕದೊಳಗೆ ವೇತನಪಾವತಿಸಬೇಕು, ತಪ್ಪಿದಲ್ಲಿ ದಂಡ ಭರಿಸಬೇಕಾಗುತ್ತದೆ. |
| (ii) | ಭಾರತ ಸರ್ಕಾರದಿಂದ ಪ್ರಾಯೋಜಿತವಾದ ಜೀವ ವಿಮಾ ಯೋಜನೆಗಳಾದ ಪ್ರಧಾನ ಮಂತ್ರಿ ಕಾರ್ಮಿಕ ಕಲ್ಯಾಣ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ (ವಾರ್ಷಿಕ ರೂ.12/-ಗಳ ಪ್ರೀಮಿಯಂ), ಹಾಗೂ ಪ್ರಧಾನ ಮಂತ್ರಿ ಜೀವನಜ್ಯೋತಿ ಬಿಮಾ ಯೋಜನೆ (ವಾರ್ಷಿಕ ರೂ.300/-ಗಳ ಪ್ರೀಮಿಯಂ) ಈ ಯೋಜನೆಗಳ ಕಂತುಗಳನ್ನು ಸಫಾಯಿ ಕರ್ಮಚಾರಿಗಳಿಗೆ ಗುತ್ತಿಗೆದಾರರೇ ಭರಿಸಿ ಜಾರಿಗೊಳಿಸುವುದು. |
| (iii) | ಆಯುಷ್ಮಾನ ಭಾರತ ಆರೋಗ್ಯ ಯೋಜನೆ ಅಡಿಯ ಪ್ರಯೋಜನಗಳನ್ನು ಕಾರ್ಮಿಕರಿಗೆ ಒದಗಿಸಲು ಗುತ್ತಿಗೆದಾರರು ಕ್ರಮ ಜರುಗಿಸುವುದು. |
| (iv) | ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಕೆಲಸ ನಿರ್ವಹಿಸುವ ಸ್ವಚ್ಛತಾ ಕಾರ್ಮಿಕರಿಗೆ ಸರ್ಕಾರದ ಕಲ್ಯಾಣ/ಸುರಕ್ಷತಾ/ಜೀವವಿಮಾ ಇತ್ಯಾದಿ ಯೋಜನೆಗಳನ್ನು ಕಡ್ಡಾಯವಾಗಿ ಗುತ್ತಿಗೆದಾರರು ಕಾರ್ಯಗತಗೊಳಿಸುವುದು.<br><br>a) **'Master Health Check up'** needs to be provided to Safai Karmacharis at regular intervals of three months.<br><br>b) Three **' Insurance Schemes'** is to be given to all Safai Karmacharis immediately under various schemes of GOI by local Banks<br><br>c) **' Housing Scemes'** to all Safai Karmacahris (to all BPL card holders) through Social Welfare Department & Government of India schemes.<br><br>d) A **' Workshop'** for awareness programme be conducted with respect to GOI & State Government Schemes, wherein **' Loan Schemes'** for educational facilities & self employment of Safai Karmacharis in concurrence with Social Welfare Department be provided. |

ಅನುಬಂಧ - 2


ನಿರ್ದೇಶಕರ ಕಚೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080-22867172/22866302
ಫ್ಯಾಕ್ಸ್:080-22863576/22861665
Email: dmablr@gmail.com
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ಅಂಬೇಡ್ಕರ್ ವೀಧಿ, ಬೆಂಗಳೂರು-560001.


ನಂ: 23749/ಡಿಎಂಎ/69/welfare/2017-18 ದಿನಾಂಕ: 5-09-2019

ಇವರಿಗೆ,

ರಾಜ್ಯದ ಎಲ್ಲಾ ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿ,
ಮಹಾನಗರಪಾಲಿಕೆ/ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳು.

ಮಾನ್ಯರೇ,

**ವಿಷಯ:** ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರದ ಮಾರ್ಗಸೂಚಿಗಳಲ್ಲಿ ತಿಳಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ತ್ರೈಮಾಸಿಕ ವರದಿ ಸಲ್ಲಿಸುವ ಕುರಿತು.

**ಉಲ್ಲೇಖ:**
1. ನಿರ್ದೇಶನಾಲಯದ ಪತ್ರ ಸಂಖ್ಯೆ: 23749 ಡಿಎಂಎ ವೆಲ್‌ಫೇರ್ 2017-18 ದಿನಾಂಕ: 12.04.2018.
2. ಸರ್ಕಾರದ ಪತ್ರದ ಸಂಖ್ಯೆ: ನಅಇ 74 ಜಿಎಂಎಸ್ 2007 ದಿನಾಂಕ: 13.07.2007.
3. ಸರ್ಕಾರದ ಆದೇಶ ಸಂಖ್ಯೆ: ನಅಇ 92 ಟಿಎಂಎಸ್ 2012 ದಿನಾಂಕ: 13.02.2015.
4. ಸರ್ಕಾರದ ಆದೇಶ ಸಂಖ್ಯೆ:ನಅಇ 287 ಎಸ್‌ಎಫ್‌ಸಿ 2014 ದಿನಾಂಕ: 06-02-2015.
5. ಸರ್ಕಾರದ ಆದೇಶ ಸಂಖ್ಯೆ:ನಅಇ 326 ಎಸ್‌ಎಫ್‌ಸಿ 2017 ದಿನಾಂಕ:09-03-2018.
6. ಸರ್ಕಾರದ ಆದೇಶ ಸಂಖ್ಯೆ:ನಅಇ 20 ಪಿಎನ್‌ಜಿ 2018 ದಿನಾಂಕ:16-01-2019.
7. ನಿರ್ದೇಶನಾಲಯದ ಪತ್ರ ಸಂಖ್ಯೆ: ಪೌನಿ:ಘವನಿ:ಪೌಕಾಸವಲತ್ತು:ಸಿಆರ್/04/10-11 ದಿನಾಂಕ:18.06.2016
8. ಎಂ.ಎಸ್. ಕಾಯ್ದೆ-2013.
9. ನಿರ್ದೇಶನಾಲಯದ ಪತ್ರ ಸಂಖ್ಯೆ: 25392 ಡಿಎಂಎ 30 ವೆಲ್‌ಫೇರ್ 2018-19 ದಿನಾಂಕ: 31.08.2018

*******

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಕ್ರೀಯವಾಗಿ ಸ್ವಚ್ಛತಾ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಕಲ್ಯಾಣಕ್ಕೆ ಸರ್ಕಾರವು ಹೆಚ್ಚು ಒತ್ತು ನೀಡಿದ್ದು, ಇವರ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ ಮತ್ತು ಆರೋಗ್ಯ ರಕ್ಷಣೆಯ ಹಿತದೃಷ್ಠಿಯಿಂದ ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ ಪ್ರಥಮ ಆದ್ಯತೆ ನೀಡಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.

1. **ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ & ಆರೋಗ್ಯ ವಿಮೆ ಮಾಡಿಸುವುದು:**

ಅಸುರಕ್ಷಿತವಾದ ವಾತಾವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಮತ್ತು ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ ಉಲ್ಲೇಖ(1) ರಂತೆ ಕಡ್ಡಾಯವಾಗಿ ಹೆಪಟೈಟೀಸ್-ಬಿ ಲಸಿಕೆಯನ್ನು ಕ್ರಮಬದ್ಧವಾಗಿ ಮೂರು ಬಾರಿ (0-1-6 ತಿಂಗಳುಗಳಿಗೆ) ನೀಡಲು ಕ್ರಮವಹಿಸುವುದು. ಉಲ್ಲೇಖ (2) ರಲ್ಲಿ ತಿಳಿಸಿರುವಂತೆ ಪ್ರತಿ ಮೂರು ತಿಂಗಳಿಗೊಮ್ಮೆ ಸಾಮಾನ್ಯ ಆರೋಗ್ಯ ತಪಾಸಣೆಯನ್ನು ಹಾಗೂ ವರ್ಷಕ್ಕೆ ಒಂದು ಬಾರಿ ಸಂಪೂರ್ಣ ದೇಹ ಪರೀಕ್ಷೆಯನ್ನು (ಮಾಸ್ಟರ್ ಹೆಲ್ತ್ ಚೆಕ್‌ಅಪ್) ಕಡ್ಡಾಯವಾಗಿ ಮಾಡಿಸುವುದು.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು/ಇತರೆ ಸ್ವಚ್ಛತೆ ಕಾರ್ಯಕರ್ತರಿಗೆ ಅನಿರೀಕ್ಷಿತ ಅಪಘಾತಗಳಾದ ಸಂದರ್ಭಗಳಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ಹಿತದೃಷ್ಠಿಯಿಂದ ಈ ಕೆಳಕಂಡ ಅಪಘಾತ/ಆರೋಗ್ಯ ವಿಮಾ ಪಾಲಿಸಿಗಳನ್ನು ಶೇ.24.10/ಶೇ.7.25 ಕಲ್ಯಾಣ ಕಾರ್ಯಕ್ರಮದಡಿಯಲ್ಲಿ ವಾರ್ಷಿಕ ಪ್ರೀಮಿಯಂ ಪಾವತಿಸಲು ಕ್ರಮವಹಿಸಿ ಕಡ್ಡಾಯವಾಗಿ ಮಾಡಿಸುವುದು.

1. ಪ್ರಧಾನಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ:- ವಾರ್ಷಿಕ 330/-ರೂಗಳ ಪ್ರೀಮಿಯಂ ಪಾವತಿಸುವುದು.
2. ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ: ವಾರ್ಷಿಕ ರೂ.12/-ಗಳ ಪ್ರೀಮಿಯಂ ಪಾವತಿಸುವುದು.
3. ಭಾರತೀಯ ಸ್ಟೇಟ್ ಬ್ಯಾಂಕ್‌ನ ಗ್ರೂಪ್ ಪರ್ಸನಲ್ ಆಕ್ಸಿಡೆಂಟ್ ಇನ್ಸುರೆನ್ಸ್: ವಾರ್ಷಿಕವಾಗಿ ರೂ.1000/-ಗಳನ್ನು ಪಾವತಿಸುವುದು.

**2. ಪೌರಕಾರ್ಮಿಕರಿಗೆ ಬೆಳಗಿನ ಉಪಹಾರ ಪೂರೈಕೆ:**

ಪೌರಕಾರ್ಮಿಕರು ಪ್ರತಿದಿನ ಬೆಳಗ್ಗೆ ಮುಂಚಿತವಾಗಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಶುಚಿತ್ವ ಕೆಲಸ ಆರಂಭಿಸುತ್ತಾರೆ. ಇವರ ಆರೋಗ್ಯದ ಹಿತದೃಷ್ಟಿಯಿಂದ ಉಲ್ಲೇಖ (3) ರಂತೆ ಪ್ರತಿ ದಿನ ಬೆಳಗಿನ ಉಪಹಾರವನ್ನು ಕಡ್ಡಾಯವಾಗಿ ನೀಡುವುದು. ಯಾವುದೇ ಕಾರಣಕ್ಕೂ ಉಪಹಾರ ಭತ್ಯೆಯನ್ನು ನಗದು ರೂಪದಲ್ಲಿ ನೀಡತಕ್ಕದಲ್ಲ.

**3. ಪೌರಕಾರ್ಮಿಕರಿಗೆ ವಾಸಯೋಗ್ಯ ವಸತಿ ಸೌಲಭ್ಯ:**

ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಡಿಯಲ್ಲಿ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಪೌರಕಾರ್ಮಿಕರಿಗೆ ಹಾಗೂ ಸ್ವಚ್ಛತಾ ಕಾರ್ಯಕರ್ತರಿಗೆ ಉಲ್ಲೇಖ (4) & (5) ರಂತೆ ಕ್ರಮವಹಿಸಿ ವಾಸಯೋಗ್ಯ ವಸತಿ ಸೌಲಭ್ಯವನ್ನು ಕಲ್ಪಿಸಲು ಕಡ್ಡಾಯವಾಗಿ ಕ್ರಮವಹಿಸಬೇಕು.

**4. ಶೇ.24.10 ಕಲ್ಯಾಣ ಕಾರ್ಯಕ್ರಮದಲ್ಲಿ ಶೇ.20 ರಷ್ಟು ಪೌರಕಾರ್ಮಿಕರ ಕಲ್ಯಾಣಕ್ಕೆ ಮೀಸಲಿಡುವುದು:**

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಉಲ್ಲೇಖ (6) ರಂತೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಶೇ.24.10 ಕಲ್ಯಾಣ ಕಾರ್ಯಕ್ರಮದಡಿಯಲ್ಲಿ ಶೇ.20 ರಷ್ಟು ಅನುದಾನವನ್ನು ಕಡ್ಡಾಯವಾಗಿ ಪೌರಕಾರ್ಮಿಕರ/ಸ್ವಚ್ಛತಾ ಕಾರ್ಯಕರ್ತರ ಕಲ್ಯಾಣಕ್ಕೆ ಮೀಸಲಿಡಲು ಕ್ರಮವಹಿಸತಕ್ಕದ್ದು ಹಾಗೂ ಸದರಿ ಅನುದಾನವನ್ನು ಆರೋಗ್ಯ ತಪಾಸಣೆ, ವೈದ್ಯಕೀಯ ವೆಚ್ಚ, ಸುರಕ್ಷಾ ದರಿಸುಗಳು, ಅಗತ್ಯವಾದ ನಿವೇಶನ ಖರೀದಿ ಹಾಗೂ ಮನೆ ನಿರ್ಮಾಣಕ್ಕೆ ಸಹಾಯಧನ ನೀಡುವ ಕಾರ್ಯಕ್ರಮಗಳಿಗೆ ಬಳಸುವುದು.

**5. ಪೌರಕಾರ್ಮಿಕರಿಗೆ ಸುರಕ್ಷತಾ ಪರಿಕರಗಳ ಪೂರೈಕೆ:**

ಉಲ್ಲೇಖ (7) ರಲ್ಲಿ ತಿಳಿಸಿರುವಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ವಚ್ಛತಾ ಕೆಲಸಗಳನ್ನು ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಸುರಕ್ಷತಾ ಪರಿಕರಗಳನ್ನು ನೀಡದಿರುವ ಬಗ್ಗೆ ಸರ್ಕಾರವು ಗಂಭೀರವಾಗಿ ಪರಿಗಣಿಸಿದ್ದು, ಪೌರಕಾರ್ಮಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಿ ಅವರಿಗೆ ಅಗತ್ಯವಿರುವ ಎಲ್ಲಾ ಸುರಕ್ಷಾ ದರಿಸುಗಳನ್ನು ಒದಗಿಸಬೇಕಿರುತ್ತದೆ. ಸಫಾಯಿ ಕರ್ಮಚಾರಿ ಆಯೋಗವು ತಿಳಿಸಿರುವಂತೆ ಪೌರಕಾರ್ಮಿಕರಿಗೆ ಜಾಗೃತಿ ಮೂಡಿಸುವಂತಹ ಕಾರ್ಯಕ್ರಮಗಳನ್ನು ಪ್ರತಿ ನಗರ ಸ್ಥಳೀಯ ಸಂಸ್ಥೆಯು ಹಮ್ಮಿಕೊಂಡು ಪೌರಕಾರ್ಮಿಕರು ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಸುರಕ್ಷತಾ ಪರಿಕರಗಳು ಉಪಯೋಗಿಸುವುದನ್ನು ಖಾತರಿ ಪಡಿಸಿಕೊಳ್ಳುವುದು.

**6. ಬಾಕಿ ಇರುವ ಪೌರಕಾರ್ಮಿಕರ ಅನುಕಂಪದ ನೇಮಕಾತಿಗಳನ್ನು ಪೂರ್ಣಗೊಳಿಸುವಿಕೆ:**

ಸೇವೆಯಲ್ಲಿರುವ ಖಾಯಂ ಪೌರಕಾರ್ಮಿಕರು/ಸ್ವಚ್ಛತಾ ಕಾರ್ಯಕರ್ತರು ನಿಧನ ಹೊಂದಿದಾಗ ಅವರ ಕಾನೂನು ಬದ್ಧ ವಾರಸುದಾರರಿಗೆ ನಿಯಮಾನುಸಾರವಾಗಿ ನಿಗದಿತ ಕಾಲ ಮಿತಿಯೊಳಗೆ ಕ್ರಮವಹಿಸಿ ಕಡ್ಡಾಯವಾಗಿ ನೇಮಕಾತಿ ಮಾಡತಕ್ಕದ್ದು.

**7. ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಪುನರ್‌ವಸತಿ ಹಾಗೂ ಅಪಘಾತದಲ್ಲಿ ನಿಧನ ಹೊಂದಿದಾಗ ಪರಿಹಾರ ನೀಡುವಿಕೆ:**

ಉಲ್ಲೇಖ(8)ರ ಮ್ಯಾನ್ಯವಲ್ ಸ್ಕ್ಯಾವೆಂಜಿಂಗ್ ಪದ್ಧತಿಯ ನಿರ್ಮೂಲನೆ ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಪುನರ್‌ವಸತಿ ಕಾಯ್ದೆ 2013 ರಂತೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಿಯಮಾನುಸಾರ ಕ್ರಮವಹಿಸಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸಬೇಕು. ಇವರಿಗೆ ಇರುವ ಪುನರವಸತಿ ಸೇವೆಗಳು ಕಾಲಕಾಲಕ್ಕೆ ಸಿಗುವಂತೆ ಕ್ರಮವಹಿಸತಕ್ಕದ್ದು ಹಾಗೂ ಮ್ಯಾನ್ಯುಯಲ್

ಸ್ಕ್ಯಾವೆಂಜಿಂಗ್ ಮಾಡುವ ಸಂದರ್ಭದಲ್ಲಿ ಅಪಘಾತ ಸಂಭವಿಸಿ ನಿಧನ ಹೊಂದಿದಾಗ ಇವರಿಗೆ ಸಿಗಬೇಕಾದ ಪರಿಹಾರ ಧನವನ್ನು ನಿಗಧಿತ ಕಾಲಮಿತಿಯೊಳಗೆ ನಿಡಲು ಕ್ರಮವಹಿಸತಕ್ಕದ್ದು.

**8. ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಪೋಷಕರ ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಸೌಲಭ್ಯ:**

ಉಲ್ಲೇಖ (9) ರಲ್ಲಿ ತಿಳಿಸಿರುವಂತೆ ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಪೋಷಕರ ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಸೌಲಭ್ಯವನ್ನು ಸಮಾಜ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಮಾಡತಕ್ಕದ್ದು.

ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ರಾಜ್ಯದ ಎಲ್ಲಾ ಆಯುಕ್ತರು/ಪೌರಾಯುಕ್ತರು/ ಮುಖ್ಯಾಧಿಕಾರಿಯವರು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರದ ಮೇಲ್ಕಂಡ ಉಲ್ಲೇಖಿತ ಮಾರ್ಗಸೂಚಿಗಳಲ್ಲಿ ತಿಳಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸೂಚಿಸಿದೆ.

ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರದ ಮಾರ್ಗಸೂಚಿಗಳಲ್ಲಿ ತಿಳಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸದಿದ್ದಲ್ಲಿ, ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಯ ಆಯುಕ್ತರು/ ಪೌರಾಯುಕ್ತರು/ಮುಖ್ಯಾಧಿಕಾರಿಯವರನ್ನೇ ನೇರ ಹೊಣೆಗಾರರನ್ನಾಗಿಸಿ ಶಿಸ್ತು ಕ್ರಮ ಜರುಗಿಸಲಾಗುವುದು. ಸದರಿ ಕಾರ್ಯಕ್ರಮಗಳನ್ನು ತಾವು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿರುವ ಬಗ್ಗೆ ತ್ರೈಮಾಸಿಕವಾಗಿ ಜಿಲ್ಲಾ ನಗರಾಭಿವೃದ್ಧಿ ಕೋಶಗಳ ಯೋಜನಾ ನಿರ್ದೇಶಕರುಗಳ ಮೂಲಕ ನಿರ್ದೇಶನಾಲಯಕ್ಕೆ ಅನುಬಂಧ-01 ರಿಂದ 04 ರ ವರೆಗಿನ ನಮೂನೆಗಳಲ್ಲಿ ವರದಿ ಸಲ್ಲಿಸಲು ಸೂಚಿಸಿದೆ.

ವಂದನೆಗಳೊಂದಿಗೆ

ಇಂತಿ ತಮ್ಮ ವಿಶ್ವಾಸಿ

ನಿರ್ದೇಶಕರು
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು

ಪ್ರತಿಯನ್ನು:-

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ.
2. ಜಿಲ್ಲಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು ರವರ ಮಾಹಿತಿಗಾಗಿ.
3. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ರಾಜ್ಯದ ಎಲ್ಲಾ ಜಿಲ್ಲೆಗಳು ರವರ ಅಗತ್ಯ ಕ್ರಮಕ್ಕಾಗಿ ಕಳುಹಿಸುತ್ತಾ (ಪ್ರತಿ 15 ದಿನಗಳಿಗೊಮ್ಮೆ ಪ್ರಗತಿ ಪರಿಶೀಲನೆ ನಡೆಸಿ ಸದರಿ ಕಾರ್ಯಕ್ರಮಗಳನ್ನು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳತಕ್ಕದ್ದು).
4. ಕಛೇರಿ ಪ್ರತಿ.

ನಿರ್ದೇಶಕರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080-22867172 / 22866302
ಫ್ಯಾಕ್ಸ್: 080-22863576 / 22861665
Email: dmablr@gmail.com
Website: www.municipaladmn.gov.in
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು 560001

ಸಂ:21475, ಡಿಎಂಎ 21 ಎಫ್‌ಎನ್‌ಸಿಇ 2017-18

ದಿನಾಂಕ:28.07.2017.

## ಸುತ್ತೋಲೆ

ವಿಷಯ: ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಹಾಗೂ ಹೊರಗುತ್ತಿಗೆ ಆಧಾರದ ಪೌರಕಾರ್ಮಿಕ ಸಿಬ್ಬಂದಿ/ಅಧಿಕಾರಿಗಳ/ಕುಟುಂಬ ವರ್ಗದವರಿಗೆ ಹೆಪಟೈಟಿಸ್-ಬಿ ಚುಚ್ಚುಮದ್ದನ್ನು ಮೂರು ಹಂತಗಳಲ್ಲಿ ಹಾಕಿಸಿಕೊಳ್ಳಲು ಕ್ರಮ ವಹಿಸುವ ಕುರಿತು.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಹೆಪಟೈಟಿಸ್ ಒಂದು ಮಾರಕ ರೋಗವಾಗಿದ್ದು, ಇದನ್ನು ನಿಯಂತ್ರಿಸಲು ಹೆಪಟೈಟಿಸ್-ಬಿ ಚುಚ್ಚುಮದ್ದು ಲಭ್ಯವಿರುತ್ತದೆ ಇದನ್ನು ಮೂರು ಹಂತಗಳಲ್ಲಿ ಹಾಕಿಸಿಕೊಳ್ಳಬೇಕಾಗಿರುತ್ತದೆ. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಹಾಗೂ ಹೊರಗುತ್ತಿಗೆ ಆಧಾರದ ಪೌರಕಾರ್ಮಿಕ ಸಿಬ್ಬಂದಿ/ಅಧಿಕಾರಿ/ಕುಟುಂಬ ವರ್ಗದವರು ಇಂತಹ ಸೋಂಕು ರೋಗಕ್ಕೆ ತುತ್ತಾಗುವ ಸಂಭವ ಹೆಚ್ಚಾಗಿದ್ದು, ಈ ಕುರಿತು ಕ್ರಮಕೈಗೊಳ್ಳಲು ವಿಡಿಯೋ ಕಾನ್ಫರೆನ್ಸ್ ಸಭೆಗಳು ಮತ್ತು ಪರಿವೀಕ್ಷಣೆ ಸಮಯದಲ್ಲಿ ಈಗಾಗಲೇ ಹಲವಾರು ಬಾರಿ ತಿಳಿಸಲಾಗಿದ್ದರೂ ಸಹಾ ಸೂಕ್ತ ಜಾಗೃತಿ ಮೂಡಿಸದೆ ಇರುವುದು ವಿಷಾದನೀಯ.

ಈ ಕುರಿತು ಕೂಡಲೇ ಕ್ರಮ ವಹಿಸಬೇಕಾಗಿದ್ದು, ಹೆಚ್ಚಿನ ಮಾಹಿತಿ ಅವಶ್ಯವಿದ್ದಲ್ಲಿ ಆರೋಗ್ಯ ಇಲಾಖೆಯ ಜಿಲ್ಲಾ ಆರೋಗ್ಯ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಕ್ರಮವಹಿಸಲು ಸೂಚಿಸಲಾಗಿದೆ. ಹೆಪಟೈಟಿಸ್-ಬಿ ಚುಚ್ಚುಮದ್ದು ಹಾಕಿಸುವ ಕಾರ್ಯವನ್ನು ಆದ್ಯತೆ ಮೇರೆಗೆ ಪರಿಗಣಿಸಿ ಸೂಕ್ತ ಕ್ರಮಕೈಗೊಂಡು ಒಂದು ವಾರದೊಳಗಾಗಿ ಕೇಂದ್ರ ಕಛೇರಿಗೆ ಮಾಹಿತಿಯನ್ನು ಒದಗಿಸಲು ಎಲ್ಲಾ ಯೋಜನಾ ನಿರ್ದೇಶಕರುಗಳಿಗೆ ಸೂಚಿಸಲಾಗಿದೆ.

ನಿರ್ದೇಶಕರು
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು.

ಇವರಿಗೆ,

1. ಎಲ್ಲಾ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ.
2. ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ